ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in

## "ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನಾ ಪತ್ರ"

ಸಂಖ್ಯೆ : ಆಯೋಪ್ರಾ/ಎಲ್ಎಓ/140/2022-23 ದಿನಾಂಕ: 29 NOV 2023

ವಿಷಯ : ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಸೋಂಪುರ ಗ್ರಾಮದ ಸ.ನಂ.19ರಲ್ಲಿನ 01ಎಕರೆ 27ಗುಂಟೆ ಮತ್ತು 0-32ಗುಂಟೆ 'ಎ' ಖರಾಬು ಸೇರಿ ಒಟ್ಟು 02ಎಕರೆ 19ಗುಂಟೆ ವಿಸ್ತೀರ್ಣದ ಪ್ರದೇಶದಲ್ಲಿ 'ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ' ಅನುಮೋದನೆ ನೀಡಲು ಕೋರಿರುವ ಬಗ್ಗೆ.

ಉಲ್ಲೇಖ:

1) ಅರ್ಜಿದಾರರಾದ M/s. Binary Realty ಪರವಾಗಿ ಪಾಲುದಾರರಾದ ಶ್ರೀ ಭರತ್.ಕೆ.ಎ ಬಿನ್ ಲೇ. ಆನಂದರೆಡ್ಡಿ, ರವರ ಮನವಿ ದಿನಾಂಕ:08.02.2023 ಮತ್ತು 13.09.2023.
2) ದಿನಾಂಕ:10.03.2023ರಂದು ನಡೆದ ಪ್ರಾಧಿಕಾರದ 83ನೇ ಸಭೆಯ ವಿಷಯ ಸಂಖ್ಯೆ:15ರ ನಡಾವಳಿ.
3) ದಿನಾಂಕ:20.10.2023ರಂದು ನಡೆದ ಪ್ರಾಧಿಕಾರದ 86ನೇ ಸಭೆಯ ವಿಷಯ ಸಂಖ್ಯೆ:32ರ ನಡಾವಳಿ.
4) ಪ್ರಾಧಿಕಾರದ ಪತ್ರ ಸಂಖ್ಯೆ: ಆಯೋಪ್ರಾ/ಎಲ್ಎಓ/140/2022-23 ದಿನಾಂಕ:31.03.2023 ಮತ್ತು 17.11.2023.
5) ಅರ್ಜಿದಾರರು ಪ್ರಾಧಿಕಾರಕ್ಕೆ ಉತ್ತಮತೆ ಶುಲ್ಕ ರೂ.4,01,000/-, ಪರಿಶೀಲನಾ ಶುಲ್ಕ ರೂ.11,500/-, ಉಸ್ತುವಾರಿ ಶುಲ್ಕ ರೂ.2,000/-, ನಕ್ಷೆಪ್ರತಿ ಶುಲ್ಕ ರೂ.2,000/-, ಕೆರೆ ಪುನರುಜ್ಜೀವನ ಶುಲ್ಕ ರೂ.2,50,500/-, ನೀರು ಸರಬರಾಜು ಸೆಸ್ ರೂ.40,500/-, ರಿಂಗ್ ರೋಡ್ ಉದ್ದೇಶಕ್ಕೆ ಹೆಚ್ಚುವರಿ ಶುಲ್ಕ ರೂ.40,500/-, ಕೊಳಗೇರಿ ಸುಧಾರಣೆಗಾಗಿ ಸೆಸ್ ರೂ.20,500/- ಮತ್ತು ಸಾಮೂಹಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆ ಸ್ಥಾಪಿಸುವ ಉದ್ದೇಶಕ್ಕಾಗಿ ಹೆಚ್ಚುವರಿ ಶುಲ್ಕ ರೂ.2,00,500/-ಗಳನ್ನು ಪಾವತಿಸಿರುವ ಚಲನ್ ನಂ.001 ದಿನಾಂಕ:03.04.2023.
6) ಅರ್ಜಿದಾರರು ಪ್ರಾಧಿಕಾರಕ್ಕೆ ಪರಿಶೀಲನಾ ಶುಲ್ಕ ರೂ.11,500/-ಗಳನ್ನು ಪಾವತಿಸಿರುವ ಚಲನ್ ನಂ.1044 ದಿನಾಂಕ:20.11.2023.
7) ಉಪನೋಂದಣಾಧಿಕಾರಿಗಳು, ಸರ್ಜಾಪುರ ರವರ ನೋಂದಣಿ ಸಂಖ್ಯೆ: SRJ-1-07757-2023-24 ದಿನಾಂಕ:24.11.2023.

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅರ್ಜಿದಾರರಾದ M/s. Binary Realty ಪರವಾಗಿ ಪಾಲುದಾರರಾದ ಶ್ರೀ ಭರತ್.ಕೆ.ಎ ಬಿನ್ ಲೇ. ಆನಂದರೆಡ್ಡಿ, ಇವರು ಉಲ್ಲೇಖ(1)ರಲ್ಲಿ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿ, ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಸೋಂಪುರ ಗ್ರಾಮದ ಸ.ನಂ.19ರಲ್ಲಿನ 01ಎಕರೆ 27ಗುಂಟೆ ಮತ್ತು 0-32ಗುಂಟೆ 'ಎ' ಖರಾಬು ಸೇರಿ ಒಟ್ಟು 02ಎಕರೆ 19ಗುಂಟೆ ವಿಸ್ತೀರ್ಣದ ಜಮೀನಿನಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲು ಕೋರಿರುತ್ತಾರೆ.

ಆನೇಕಲ್ ಸ್ಥಳೀಯ ಯೋಜನಾ ಪ್ರದೇಶದ ಅನುಮೋದಿತ ಮಹಾಯೋಜನೆ–2031 ರಂತೆ ಪ್ರಸ್ತಾಪಿತ ಪ್ರದೇಶವು ವಸತಿ ಭೂ ಉಪಯೋಗ ವಲಯದಲ್ಲಿದ್ದು, ಪ್ರಸ್ತಾವಿತ ಪ್ರದೇಶಕ್ಕೆ ಮಾನ್ಯ ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ರವರಿಂದ 'ವಸತಿ' ಉದ್ದೇಶಕ್ಕಾಗಿ ಭೂಪರಿವರ್ತನೆಯಾಗಿರುತ್ತದೆ. ಮಾನ್ಯ ಜಿಲ್ಲಾಧಿಕಾರಿಗಳ ಆದೇಶ ಸಂಖ್ಯೆ: ಎಲ್ಎನ್‌ಡಿ(ಎ)ಸಿಆರ್:274/22–23 ದಿನಾಂಕ: 08.02.2023ರಲ್ಲಿ ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಸೋಂಪುರ ಗ್ರಾಮದ ಸ.ನಂ.25ರಲ್ಲಿನ 0–06ಗುಂಟೆ ಪ್ರದೇಶವನ್ನು ಸಾರ್ವಜನಿಕ ರಸ್ತೆಗಾಗಿ ಕಾಯ್ದಿರಿಸಿ ಆದೇಶಿಸಲಾಗಿರುತ್ತದೆ. ಹಾಗಾಗಿ ಪ್ರಸ್ತಾವಿತ ಪ್ರದೇಶಕ್ಕೆ 12.19ಮೀ. ಅಗಲದ ರಸ್ತೆಯಿಂದ ರಸ್ತೆ ಸಂಪರ್ಕ ಹೊಂದಿರುತ್ತದೆ.

ಪ್ರಸ್ತಾವಿತ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ನೀಡುವ ಸಂಬಂಧ ಉಲ್ಲೇಖ(2) ಮತ್ತು (3)ರ ದಿನಾಂಕ:10.03.2023ರಂದು ನಡೆದ ಪ್ರಾಧಿಕಾರದ 83ನೇ ಸಭೆಯ ವಿಷಯ ಸಂಖ್ಯೆ:15 ಮತ್ತು ದಿನಾಂಕ:20.10.2023ರಂದು ನಡೆದ ಪ್ರಾಧಿಕಾರದ 86ನೇ ಸಭೆಯ ವಿಷಯ ಸಂಖ್ಯೆ:32ರ ನಡಾವಳಿಯಲ್ಲಿ ಅಗತ್ಯ ಶುಲ್ಕಗಳನ್ನು ಹಾಗೂ ಅಗತ್ಯ ದಾಖಲೆಗಳನ್ನು ಪಡೆದುಕೊಂಡು ವಲಯ ನಿಯಮಾವಳಿಯನ್ವಯ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲು ತೀರ್ಮಾನಿಸಲಾಗಿರುತ್ತದೆ.

ಪ್ರಾಧಿಕಾರದ ಸಭೆಯ ನಡವಳಿಕೆಯ ರೀತ್ಯ ಸದರಿ ವಸತಿ ಉಪಯೋಗದ ಅಭಿವೃದ್ಧಿ ನಕ್ಷೆ ಅನುಮೋದನೆಗೆ ಸಂಬಂಧಿಸಿದಂತೆ, ಉಲ್ಲೇಖ(4)ರ ಪ್ರಾಧಿಕಾರದ ಪತ್ರದಲ್ಲಿ ಅರ್ಜಿದಾರರಿಗೆ ನಿಗಧಿತ ಶುಲ್ಕಗಳನ್ನು ಪಾವತಿಸುವಂತೆ ತಿಳಿಸಲಾಗಿತ್ತು. ಅದರಂತೆ ಅರ್ಜಿದಾರರು ಉಲ್ಲೇಖ(5) ಮತ್ತು (6)ರಲ್ಲಿ ಈ ಪ್ರಾಧಿಕಾರಕ್ಕೆ ನಿಗಧಿತ ಶುಲ್ಕಗಳನ್ನು ಪಾವತಿಸಿರುತ್ತಾರೆ. ಹಾಗೂ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಯ ನೀಲಿ ಪ್ರತಿಗಳನ್ನು ಸಲ್ಲಿಸಿರುತ್ತಾರೆ.

ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಜಾಗಗಳನ್ನು ಉಪನೋಂದಣಾಧಿಕಾರಿಗಳು, ಸರ್ಜಾಪುರ ಇವರ ನೋಂದಣಿ ಸಂಖ್ಯೆ: SRJ-1-07757-2023-24 ದಿನಾಂಕ:24.11.2023ರಂತೆ ಈ ಪ್ರಾಧಿಕಾರಕ್ಕೆ ನೋಂದಾಯಿಸಿ, ಉಲ್ಲೇಖ(7)ರಂತೆ ನೋಂದಾಯಿಸಿರುವ ಮೂಲ ಪರಿತ್ಯಾಜನಾ ಪತ್ರವನ್ನು ಅರ್ಜಿದಾರರು ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಸೋಂಪುರ ಗ್ರಾಮದ ಸ.ನಂ.19ರಲ್ಲಿನ 01ಎಕರೆ 27ಗುಂಟೆ ಮತ್ತು 0–32ಗುಂಟೆ 'ಎ' ಖರಾಬು ಸೇರಿ ಒಟ್ಟು 02ಎಕರೆ 19ಗುಂಟೆ ವಿಸ್ತೀರ್ಣದ ಜಮೀನಿನಲ್ಲಿ ವಸತಿ ಉಪಯೋಗದ "ಅಭಿವೃದ್ಧಿ ಯೋಜನಾ ನಕ್ಷೆಗೆ" ಅನುಮೋದಿತ ಮಹಾಯೋಜನೆಯ ನಿಯಮಾವಳಿಗಳನ್ವಯ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದಿಸಿದೆ.

1) ಕುಡಿಯುವ ನೀರು ಹಾಗೂ ತ್ಯಾಜ್ಯ ನೀರು ವಿಲೇವಾರಿ ಮತ್ತು ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. ಕುಡಿಯುವ ನೀರು ಪೂರೈಕೆ ಬಗ್ಗೆ ಅರ್ಜಿದಾರರು ಖಾತ್ರಿಪಡಿಸುವುದು.
2) ಪ್ರಾಧಿಕಾರವು ಅನುಮೋದಿಸಿರುವ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ.
3) ಉದ್ಯಾನವನ ಮತ್ತು ಬಯಲು ಜಾಗಗಳನ್ನು ಹಾಗೂ ಸಿ.ಎ. ಜಾಗಗಳನ್ನು ಅನುಮೋದಿತ ನಕ್ಷೆ ಪ್ರಕಾರ ಅಭಿವೃದ್ಧಿಪಡಿಸುವುದು.
4) ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ಗಿಡಮರಗಳನ್ನು ಬೆಳೆಸಿ ಅಭಿವೃದ್ಧಿಪಡಿಸುವುದು.



B

ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in

5) ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರ ಪರಿಶೀಲಿಸಿಕೊಳ್ಳತಕ್ಕದ್ದು.

6) ವಿವರವಾದ ಕಟ್ಟಡ ನಕ್ಷೆಗಳನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 15ರ ಅಡಿಯಲ್ಲಿ ಯೋಜನಾ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು.

7) ವಲಯ ನಿಯಮಾವಳಿಯಂತೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯು ಉದ್ದೇಶಿತ ಕಟ್ಟಡಗಳ ಬ್ಲಾಕ್‌ಗಳು, ಉಪಗಮನ ರಸ್ತೆ, ಹೈವೇಗಳು, ಉದ್ಯಾನವನ ಮತ್ತು ಖಾಲಿ ಜಾಗಗಳು, ನಾಗರೀಕ ಸೌಕರ್ಯ ಜಾಗಗಳನ್ನು ನಿಗದಿಪಡಿಸಿರುವ ನಕ್ಷೆಯಾಗಿದ್ದು ಎಲ್ಲಾ ಅಗತ್ಯ ನಿರಾಕ್ಷೇಪಣಾ ಪತ್ರಗಳನ್ನು ಕಟ್ಟಡ ನಕ್ಷೆ ಅನುಮೋದಿಸುವ ಸಂದರ್ಭದಲ್ಲಿ ಸಲ್ಲಿಸತಕ್ಕದ್ದು.

8) ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ-2016 ರ ಕಲಂ (3) ಮತ್ತು (4) ರ ರೀತ್ಯ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ದಲ್ಲಿ ವಸತಿ ಯೋಜನೆಯ ಪೂರ್ವಭಾವಿ ನೋಂದಣಿಯನ್ನು ಕಡ್ಡಾಯವಾಗಿ ಮಾಡತಕ್ಕದ್ದು.

9) ಪ್ರಸ್ತಾವಿತ ಯೋಜನೆಯಲ್ಲಿ ನೀರು ಸರಬರಾಜು, STP/ಸೆಪ್ಟಿಕ್ ಟ್ಯಾಂಕ್ ಮುಂತಾದ ಮೂಲಭೂತ ಸೌಕರ್ಯಗಳನ್ನು ವಿನ್ಯಾಸ ಮಾಲೀಕರು ಒದಗಿಸತಕ್ಕದ್ದು.

10) ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಪೂರ್ವದಲ್ಲಿ ಅಗತ್ಯ ಅಭಿವೃದ್ಧಿ ಶುಲ್ಕವನ್ನು ಯೋಜನಾ ಪ್ರಾಧಿಕಾರಕ್ಕೆ/ಸ್ಥಳೀಯ ಸಂಸ್ಥೆಗೆ ಪಾವತಿಸತಕ್ಕದ್ದು.

11) ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ಥೆಯಲ್ಲಿ ಅಡಚಣೆಯುಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು, ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು.

12) ಅಗ್ನಿಶಾಮಕ ಇಲಾಖೆ, ವೈಮಾನಿಕ ಇಲಾಖೆ, ಸ್ಥಳೀಯ ಸಂಸ್ಥೆ, ಬೆಸ್ಕಾಂ ಹಾಗೂ ಕೆ.ಎಸ್.ಪಿ.ಸಿ.ಬಿ. ಮಂಡಳಿ/ಇಲಾಖೆಗಳ ನಿರಾಕ್ಷೇಪಣಾ ಪತ್ರಗಳನ್ನು ಯೋಜನಾ ಪ್ರಾಧಿಕಾರವು ಪಡೆದು ಕಟ್ಟಡ ನಕ್ಷೆ ಮಂಜೂರಾತಿ ನೀಡುವುದು.

13) ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಸರ್ಕಾರಿ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳುವ ಅಧಿಕಾರವು ಪ್ರಾಧಿಕಾರ ಹೊಂದಿರುತ್ತದೆ.

14) ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ/ದಾಖಲಾತಿ ನೀಡಿದ್ದಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯು ತಂತಾನೇ ರದ್ದಾಗುತ್ತದೆ.

15) ಅಭಿವೃದ್ಧಿ ಯೋಜನೆಯಲ್ಲಿನ ಘನತ್ಯಾಜ್ಯಗಳನ್ನು ಪ್ಲಾಸ್ಟಿಕ್ ಮತ್ತು ಇತ್ಯಾದಿಯಾಗಿ ವಿಂಗಡಿಸಿ, Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು.

16) ಪ್ರಸ್ತಾವಿತ ಪ್ರದೇಶದಲ್ಲಿ ಹಾದು ಹೋಗಿರುವ ಹಳ್ಳದ ಮೇಲೆ ಸೇತುವೆ ನಿರ್ಮಾಣ ಮಾಡಲು ಮಾನ್ಯ ಜಿಲ್ಲಾಧಿಕಾರಿಗಳು, ಬೆಂಗಳೂರು ಇವರ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ: ಎಲ್‌ಎನ್‌ಡಿ(ಎ)ಸಿಆರ್: 253/22-23 ದಿನಾಂಕ:17.02.2023ರಲ್ಲಿ ಅನುಮತಿ ನೀಡಲಾಗಿದ್ದು, ಸದರಿ ಅಧಿಕೃತ ಜ್ಞಾಪನಾ ಪತ್ರದಲ್ಲಿನ ಎಲ್ಲಾ ಷರತ್ತುಗಳನ್ನು ಪಾಲಿಸತಕ್ಕದ್ದು.



B

17) ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲೀನ ನೀರನ್ನು ಬಿಡಬಾರದು. ಸದರಿ ವಿನ್ಯಾಸ ನಕ್ಷೆಯಲ್ಲಿ ಸೂಚಿಸಲಾಗಿರುವ ನಾಲಾ ಪ್ರದೇಶಗಳಲ್ಲಿ ರಸ್ತೆ ಪರಿಚಲನೆಯನ್ನು ಮುಂದುವರಿಸುವಾಗ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದು ಕಲ್ವರ್ಟ್ ಕಟ್ಟತಕ್ಕದ್ದು, ಹಾಗೂ ನೀರಿನ ಹರಿವೆಗಾಗಿ ಯಾವುದೇ ಅಡಚಣೆ ಮಾಡತಕ್ಕದ್ದಲ್ಲ, ಹಾಗೂ ಸೂಕ್ತ ಡ್ರೈನೇಜ್ ನಿರ್ಮಿಸಿ ಸಂರಕ್ಷಿಸತಕ್ಕದ್ದು, ಹಾಗೂ ಯಾವುದೇ ಒತ್ತುವರಿ ಮಾಡತ್ತಕ್ಕದ್ದಲ್ಲ. ಸರ್ಕಾರದ ಅಧಿಸೂಚನೆ ಸಂಖ್ಯೆ: ಯುಡಿಡಿ 15 ಟಿಟಿಪಿ 2015, ದಿನಾಂಕ:21.04.2020 ರ ರೀತ್ಯ ಜಲಪ್ರದೇಶಗಳ ಬಫರ್ ಜಾಗದಲ್ಲಿ water pumping stations, Walking tracks, Play fields without any building constructions, cycling tracks & Parks ಗಳನ್ನು ಮಾತ್ರ ಅಭಿವೃದ್ಧಿಪಡಿಸತಕ್ಕದ್ದು.

18) ಆನೇಕಲ್ ಯೋಜನಾ ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು.

ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಲ್ಲಿ, ನಿಯಮಗಳನ್ವಯ ಮುಂದಿನ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

**ಸದಸ್ಯ ಕಾರ್ಯದರ್ಶಿಗಳು ಹಾಗೂ ನಗರ ಮತ್ತು**
**ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು**
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.

**ಇವರಿಗೆ,**

**M/s. Binary Realty ಪರವಾಗಿ ಪಾಲುದಾರರಾದ**
**ಶ್ರೀ ಭರತ್.ಕೆ.ಎ ಬಿನ್ ಲೇ. ಆನಂದರೆಡ್ಡಿ,**
ನಂ.73/2, ಚಂಬೇನಹಳ್ಳಿ ಗ್ರಾಮ, ದೊಮ್ಮಸಂದ್ರ ಅಂಚೆ,
ಅಸೆಟ್ ಸೆರಿನೆ ಅಪಾರ್ಟ್‌ಮೆಂಟ್ ಹತ್ತಿರ,
ಸರ್ಜಾಪುರ ಮುಖ್ಯರಸ್ತೆ, ಬೆಂಗಳೂರು–562 125.



B